# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸೇಡಂ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡುವ ಬಗ್ಗೆ.

ಓದಲಾಗಿದೆ:
(1) ಸರ್ಕಾರದ ಆದೇಶ ಸಂಖ್ಯೆ:ನಅಇ 129 ಬೆಮಪ್ರಾ 2007, ದಿನಾಂಕ:15.6.2007.
(2) ಸೇಡಂ ಪುರಸಭಾ ಯೋಜನಾ ಪ್ರಾದಿಕಾರದ ಪತ್ರ ಸಂಖ್ಯೆ:ಪುಯೋಪ್ರಾ/ಸೇಡಂ.ಮ..ಯೋ/2009-10, ದಿನಾಂಕ: 24/2/2010.
(3) ಸಹಾಯಕ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಗುಲ್ಬರ್ಗಾ ಇವರ ಪತ್ರ ಸಂಖ್ಯೆ:ನಗ್ರಾಯೋ/ಸನಿ.ಗು/ಮಾವ/2010-11/206, ದಿನಾಂಕ:19/5/2010.
(4) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಇವರ ಏಕ ಕಡತ ಸಂಖ್ಯೆ:ನಗ್ರಾಯೋ/ಉನಿ (ಯೋವಿ) ಸೇಡಂ.ಮ.ಯೋ/29/2010, ದಿನಾಂಕ:29/6/2010 ರಲ್ಲಿ ನೀಡಿರುವ ಅಭಿಪ್ರಾಯ.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರದ ಆದೇಶದಲ್ಲಿ, ಸೇಡಂ ನಗರದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ.

ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ ಸೇಡಂ ಪುರಸಭಾ ಯೋಜನಾ ಪ್ರಾದಿಕಾರವು ಸೇಡಂ ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1)ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ, ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (3)ರ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಡತದಲ್ಲಿ ಸೇಡಂ ನಗರದ ಜನಸಂಖ್ಯೆಯು 2021ರಲ್ಲಿ 62,000ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಸೇಡಂ ನಗರದ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 809.00 ಹೆಕ್ಟೇರ್ ಪ್ರದೇಶವನ್ನು ನಗರದ ಅಭಿವೃದ್ಧಿಗಾಗಿ ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ (12)ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ 809.00 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 310.00 ಹೆಕ್ಟೇರ್ (ಶೇ.38.32), ವಾಣಿಜ್ಯಕ್ಕಾಗಿ 31.00 ಹೆಕ್ಟೇರ್ (ಶೇ.3.83), ಕೈಗಾರಿಕೆಗಾಗಿ 145.00 ಹೆಕ್ಟೇರ್ (ಶೇ.17.92),

ಸಾರ್ವಜನಿಕ/ಅರೆಸಾರ್ವಜನಿಕಕ್ಕಾಗಿ 34.00 ಹೆಕ್ಟೇರ್ (ಶೇ.4.20), ಉದ್ಯಾನವನ, ಆಟದ ಮೈದಾನ ಮತ್ತು ಬಯಲು ಪ್ರದೇಶಕ್ಕಾಗಿ 76.00 ಹೆಕ್ಟೇರ್ (ಶೇ.9.40), ಸಾರಿಗೆ/ಸಂಪರ್ಕ ವಲಯಕ್ಕೆ 211.00 ಹೆಕ್ಟೇರ್ (ಶೇ.26.08), ನಾಗರೀಕ ಸೌಲಭ್ಯಕ್ಕೆ 2.00 ಹೆಕ್ಟೇರ್ (ಶೇ.0.25) ಪ್ರದೇಶವನ್ನು ನಿಗದಿಪಡಿಸಿ ಮಹಾ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3)ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ನಂತರ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 87 ಗುಅಪ್ರಾ 2010, ಬೆಂಗಳೂರು,**
**ದಿನಾಂಕ:14.02.2011**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸೇಡಂ ನಗರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13)(1)ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

**" ಈ ಆದೇಶದ ದಿನಾಂಕದಿಂದ 2 (ಎರಡು) ವರ್ಷಗಳವರೆಗೆ ಯೋಜನಾ ಪ್ರಾಧಿಕಾರವು ಯಾವುದೇ ತರಹದ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸಕೂಡದು"**

ಮಹಾಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಮತ್ತು ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎಂ.ಎಂ.ಹಿರೇಮಠ)**
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

(1)ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
(2)ಸದಸ್ಯ ಕಾರ್ಯದರ್ಶಿಗಳು, ಪುರಸಭಾ ಯೋಜನಾ ಪ್ರಾಧಿಕಾರ, ಸೇಡಂ.
(3)ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಗುಲ್ಬರ್ಗಾ.
(4)ಕರ್ನಾಟಕ ರಾಜ್ಯ ಪತ್ರ.
(5)ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.